# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 727
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 21.02.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಶಾಲಾ ಕಾಲೇಜುಗಳ ಬಡ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಉಚಿತ / ರಿಯಾಯಿತಿ ಸಾರಿಗೆ ಸೌಲಭ್ಯಗಳನ್ನು ಈ ಕೆಳಕಂಡಂತೆ ಒದಗಿಸಿದ್ದು, ಇದು ಅವರುಗಳ ಅವಶ್ಯಕತೆಗನುಗುಣವಾಗಿದೆ.<br>1. 7ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಉಚಿತ ಪಾಸು ವಿತರಿಸಲಾಗುತ್ತಿದೆ.<br>2. 2017-18 ನೇ ಸಾಲಿನಿಂದ ಎಲ್ಲಾ ತರಗತಿಗಳ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡಲಾಗುತ್ತಿದೆ.<br>3. ದಿನಾಂಕ:11.06.2023ರಿಂದ ಜಾರಿಗೊಳಿಸಿರುವ ಶಕ್ತಿ ಯೋಜನೆಯಡಿ ರಾಜ್ಯದ ನಿವಾಸಿಗಳಾದ ಎಲ್ಲಾ ವಿದ್ಯಾರ್ಥಿನಿಯರಿಗೆ ರಾಜ್ಯದೊಳಗೆ ಮಾತ್ರ ಅನ್ವಯವಾಗುವಂತೆ ಉಚಿತ ಪ್ರಯಾಣ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.<br>4. ಇನ್ನುಳಿದ ವಿದ್ಯಾರ್ಥಿಗಳಿಗೆ ರಿಯಾಯಿತಿ ದರದ ಬಸ್ ಪಾಸ್‌ಗಳನ್ನು ವಿತರಣೆ ಮಾಡಲಾಗುತ್ತಿದೆ. |
| ಆ. | ಮಹಿಳೆಯರಿಗೆ ನೀಡಿರುವಂತೆ ವಿದ್ಯಾರ್ಥಿಗಳಿಗೂ ಉಚಿತ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು; (ವಿವರ ನೀಡುವುದು) | ಈಗಾಗಲೇ ಶಕ್ತಿ ಯೋಜನೆಯಡಿ ಎಲ್ಲಾ ವಿದ್ಯಾರ್ಥಿನಿಯರಿಗೆ ಉಚಿತ ಸಾರಿಗೆ ಸೌಲಭ್ಯ ಒದಗಿಸಲಾಗಿದೆ ಹಾಗೂ ಎಲ್ಲಾ ತರಗತಿಗಳ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೂ ಸಹ ಉಚಿತ ಬಸ್ ಪಾಸ್ ವಿತರಣೆ ಮಾಡಲಾಗುತ್ತಿದೆ. |
| ಇ. | ಯಾವ ಕಾಲಮಿತಿಯಲ್ಲಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೂ ಉಚಿತ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗುವುದು? | |

ಸಂಖ್ಯೆ: ಟಿಡಿ 55 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು